ಆರೋಗ್ಯ ಕೇಂದ್ರಗಳನ್ನು ಸ್ಥಾಪನೆ ಮಾಡಬೇಕಾಗಿದ್ದು, ಈಗಾಗಲೇ ಅಲ್ಲಿ 8 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಆದುದರಿಂದ, ಸೇಡಂ ತಾಲ್ಲೂಕಿಗೆ ಇನ್ನೂ ಹೆಚ್ಚಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸ್ಥಾಪನೆಗೆ ಅವಕಾಶವಿರುವುದಿಲ್ಲ.

ಆ) ಅನ್ವಯಿಸುವುದಿಲ್ಲ.

ಡಾ: ಶರಣಪ್ರಕಾಶ್ ರುದ್ರಪ್ಪ ಪಾಟೀಲ್: 2001ರ Census ಪ್ರಕಾರ ಅದು ಈಗ 7 ಮಾಡಬೇಕಾಗಿತ್ತು 8 ಮಾಡಿದ್ದಾರೆ. 2010ರಲ್ಲಿದ್ದೇವೆ ಎನ್ನುವುದನ್ನು ಮಾನ್ಯ ಸಚಿವರು ಮರೆತಿದ್ದಾರೆಂದೆನಿಸುತ್ತದೆ. ಈಗ ಹೊಸ census ನಡೆಯುತ್ತಿದೆ. 2001 ಎಂದರೆ ಇಲ್ಲಿಗೆ 10 ವರ್ಷಗಳಾಯಿತು. Always you think forward. 2010 ರಲ್ಲಿ ಇನ್ನೂ census complete ಆಗಿಲ್ಲ ಆದರೆ, projected population ಇರುತ್ತದೆ. ಆ projected population ನೋಡಿ, ಅವಶ್ಯಕತೆ ಇದೆ ಎಂದು ನಿಮಗೆ ಗೊತ್ತಿದೆ. ಆದರೆ, ಯಾರೋ ಅಧಿಕಾರಿಗಳು ತಪ್ಪು ಮಾಹಿತಿ ಕೊಟ್ಟಿದ್ದು ಮಾನ್ಯ ಸಚಿವರು ಇಲ್ಲಿ ಒಂದು ರೀತಿ ಉತ್ತರ ಕೊಟ್ಟರೆ ನಾವು ಜನರಿಗೆ ಏನು ಹೇಳಬೇಕು? ಮಾನ್ಯ ಸಚಿವರು 2011ರ census ಪ್ರಕಾರ ನಾವು ಮಾಡಿಕೊಡುತ್ತೇವೆಂದು ಮಾತು ಕೊಡಬೇಕು. ಅದು ಬಿಟ್ಟು 2001ರ ವಿಷಯ ಈಗ ಹೇಳಿದರೆ ಏನು ಹೇಳುವುದು?

ಶ್ರೀ ಬಿ ಶ್ರೀರಾಮುಲು: 8 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕೆಲಸ ಮಾಡುತ್ತಿವೆ. 2001 ಜನಗಣತಿ ಪ್ರಕಾರ ಮಾಡಿದ್ದು ಈಗ ಜನಸಂಖ್ಯೆ ಜಾಸ್ತಿಯಾಗಿದೆ ಎಂದು ಮಾನ್ಯ ಸದಸ್ಯರು ಕೇಳುತ್ತಿದ್ದಾರೆ. ಪ್ರಾಯಶ: ಅದಷ್ಟು ಬೇಗನೆ ಮಾನ್ಯ ಸದಸ್ಯರು ಒಂದು ಮನವಿ ಪತ್ರ ಕೊಟ್ಟರೆ ವ್ಯವಸ್ಥೆ ಮಾಡಿ ಕೊಡುತ್ತೇನೆ.

ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು:

ಶ್ರೀ ಜಗದೀಶ್ ಶೆಟ್ಟರ್(ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು): ಮಾನ್ಯ ಅಧ್ಯಕ್ಷರೆ, ದಿನಂಕ 1-7-2010 4ನೇ ಪಟ್ಟಿಯಿಂದ ಲಿಖಿತ

ಮೂಲಕ ಉತ್ತರಿಸುವ 55 ಪ್ರಶ್ನೆಗಳ ಪೈಕಿ 47 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ದಿನಾಂಕ 30–06–2010ರ 3ನೇ ಪಟ್ಟಿಯಿಂದ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಉತ್ತರಗಳನ್ನು ಮತ್ತು ಲಿಖಿತ ಮೂಲಕ ಉತ್ತರಿಸುವ 39 ಪ್ರಶ್ನೆಗಳ ಪೈಕಿ 36 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು: ಮಂಡಿಸಲಾಯಿತು. ಅನುಬಂಧ (ಅ)

3. ಸಭೆಯ ಮುಂದಿಡಲಾದ ಕಾಗದ ಪತ್ರಗಳು:

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು)(ಮುಖ್ಯಮಂತ್ರಿಯವರ ಪರವಾಗಿ):

i) ಭಾರತ ಸಂವಿಧಾನ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2009ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರ ಮತ್ತು ಮಹಾಲೆಕ್ಕ ಪರಿಶೋಧಕರು ನೀಡಿರುವ (ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳು) ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ii) ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ 31ನೇ ಮಾರ್ಚ್ 2009ಕ್ಕೆ ಕೊನೆಗೊಂಡ ವರ್ಷಕ್ಕೆ ಭಾರತದ ನಿಯಂತ್ರಕರು ಮತ್ತು ಮಹಾಲೆಕ್ಕ ಪರಿಶೋಧಕರು ನೀಡಿರುವ ಮಾಹಿತಿ ವ್ಯವಸ್ಥೆಗಳ ಲೆಕ್ಕಪರಿಶೋಧನೆ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

I ಶ್ರೀ ಬಿ.ಎಸ್.ಯಡಿಯೂರಪ್ಪ, ಮಾನ್ಯ ಮುಖ್ಯಮಂತ್ರಿಗಳ ಪರವಾಗಿ:–

(iii) 1957ರ ಕರ್ನಾಟಕ ಮಾರಾಟ ತೆರಿಗೆ ಕಾಯ್ದೆಯ ಪ್ರಕರಣ 39ರ ಮೇರೆಗೆ:

1. ದಿನಾಂಕ 05.07.2002ರಂದು ಹೊರಡಿಸಲಾಗಿದ್ದ ಅಧಿಸೂಚನೆ ಸಂಖ್ಯೆ ಎಫ್‌ಡಿ 31 ಸಿಎಸ್‌ಎಲ್ 2002 ರಲ್ಲಿ ವಿವರಿಸಿದಂತೆ ಕರ್ನಾಟಕ ಸರ್ಕಾರವು **"ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್"** ಅನ್ನು ಒಂದು **ತೈಲ ಕಂಪನಿ** ಎಂದು ನಿರ್ದಿಷ್ಟ ಉದ್ದೇಶಕ್ಕಾಗಿ ಪರಿಗಣಿಸಲು ದಿನಾಂಕ 24.03.2010ರಂದು ಹೊರಡಿಸಲಾಗಿರುವ ಎಫ್‌ಡಿ 50 ಸಿಎಸ್‌ಎಲ್ 2010ರ ಅಧಿಸೂಚನೆ.